**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.72/2024**

| | | |
|---|---|---|
| ಸಾಕ್ಷಿದಾರರ ಹೆಸರು | : ವನಿತಾ ಎಂ. | ಪ್ರಾಸಾ-6 |
| ಗಂಡನ ಹೆಸರು | : ರಮೇಶ್ | ಚಾಸಾ-12 |
| ವಯಸ್ಸು | : 39 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಹೆಚ್.ಸಿ.144 | ದಿನಾಂಕಃ02.02.2026. |
| ವಾಸಸ್ಥಳ | : ಮೂಡಿಗೆರೆ ಪೋಲಿಸ್ ಠಾಣೆ. | |

**:ಮುಖ್ಯ ವಿಚಾರಣೆ: ಪ್ರಾಜ್ಞ್ಯಾ ಸ.ಸ.ಅ. ರವರಿಂದಃ**

ನಾನು ದಿ.10.11.2023 ರಿಂದ ದಿ.23.08.2023 ರವರೆಗೂ ಬಣಕಲ್ ಪೋಲಿಸ್ ಠಾಣೆಯಲ್ಲಿ ಹೆಚ್.ಸಿ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ.27.06.2023 ಸ.17.00 ರ ಸಮಯಕ್ಕೆ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಸ್ವೀಕರಿಸಿ ಠಾಣಾ ಮೊ.ನಂ.69/2023 ರ ಕಲಂ 354, 354 ಎ, 509 ಮತ್ತು 506 ಐ.ಪಿ.ಸಿ ರಡಿಯಎಲ್ಲಿ ಪ್ರಕರಣವನ್ನು ದಾಖಲಿಸಿಕೊಂಡಿರುತ್ತೇನೆ. ನಂತರ 17.30 ರ ಸಮಯಕ್ಕೆ ನ್ಯಾಯಾಲಯಕ್ಕೆ ಚಾಸಾ-10 ರವರ ಮುಖೇನ ಕಳುಹಿಸಿಕೊಟ್ಟಿರುತ್ತೇನೆ. ನಂತರ ಪ್ರಕರಣದ ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ-13 ರವರಿಗೆ ಹಸ್ತಾಂತರಿಸಿರುತ್ತೇನೆ.

ಸಾಕ್ಷಿಯು ನಿಪಿ-1 ಮತ್ತು 2 ರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-1(ಬಿ) ಮತ್ತು 2(ಬಿ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಡಿ.ಕೆ.ಪಿ ವಕೀಲರ ಪರವಾಗಿ ಶ್ರೀ ಎಂ.ಎಂ.ಆರ್. ವಕೀಲರಿಂದಃ**

ಚಾಸಾ-1 ರವರು ದೂರನ್ನು ನೀಡುವ ಪೂರ್ವದಲ್ಲಿಯೇ ಅವರು ಬರವಣಿಗೆ ಮಾಡಿಕೊಂಡು ಬಂದಿದ್ದರು. ಒಂದು ವೇಳೆ ಸದರಿಯವರುಗಳು ನೀಡಿದ ದೂರಿನಲ್ಲಿ ತಿದ್ದುಪಡಿ ಅಥವಾ ಸೇರ್ಪಡೆ ಇದ್ದಲ್ಲಿ ಕಿರು ಸಹಿಯನ್ನು ಪಡೆದುಕೊಳ್ಳುತ್ತೇವೆ ಎಂದರೆ ಸರಿ. ನಿಪಿ-1 ನ್ನು ನಾನು ಸ್ವೀಕರಿಸಿಕೊಳ್ಳುವಾಗ ಯಾವುದೇ ತಿದ್ದುಪಡಿ ಮತ್ತು ಸೇರ್ಪಡೆ ಇರಲಿಲ್ಲ. ನಿಪಿ-1 ರಲ್ಲಿ ಬಾಗಿಲು ಮತ್ತು ರಾತ್ರಿ ಎಂಬುವ ಪದವನ್ನು ಸೇರ್ಪಡೆ ಮಾಡಲಾಗಿರುತ್ತದೆ ಎಂದರೆ ಸರಿ. ನನ್ನ ಎದುರಲ್ಲಿ ನಿಪಿ-1 ರಲ್ಲಿ ಯಾವುದೇ ತಿದ್ದುಪಡಿಯನ್ನು ಮಾಡಿರುವುದಿಲ್ಲ. ಪ್ರಥಮ ವರ್ತಮಾನ ವರದಿಯನ್ನು ದಾಖಲಿಸುವ ಪೂರ್ವದಲ್ಲಿ ಪಿರ್ಯಾದುದಾರರು ನೀಡಿದ ದೂರನ್ನು ಓದುತ್ತೇವೆ ಎಂದರೆ ಸರಿ. ಸದರಿ ಸಮಯದಲ್ಲಿ ತಿದ್ದುಪಡಿ ಮತ್ತು ಸೇರ್ಪಡೆಯನ್ನು ಗಮನಿಸಿರುತ್ತೇನೆ. ಆ ಸಮಯದಲ್ಲಿ ಪಿರ್ಯಾದುದಾರರ ಕಿರು ಸಹಿಯನ್ನು ಪಡೆದುಕೊಳ್ಳಲು ಯಾವುದೇ ಸಮಸ್ಯೆ ಇರಲಿಲ್ಲ. ನಿಪಿ-1 ನ್ನು ನಾನು ಮತ್ತು ಚಾಸಾ-1 ರವರು ಸೇರಿ ಸೃಷ್ಟಿಸಿರುತ್ತೇವೆ ಎಂದರೆ ಸರಿಯಲ್ಲ. ನಿಪಿ-1 ನ್ನು ಚಾಸಾ-1 ರವರು ಠಾಣಾ ಅಧಿಕಾರಿಗೆ ನೀಡಿರುತ್ತಾರೆ. ಪ್ರಕರಣವನ್ನು ದಾಖಲಿಸುವ ಪೂರ್ವದಲ್ಲಿ ಯಾವುದೇ

ದೂರನ್ನು ಸ್ವೀಕರಿಸಿದೇ ಇಲಾಖಾ ಅಂಕಿ ಅಂಶಕ್ಕೋಸ್ಕರ ಸುಳ್ಳು ಪ್ರಕರಣವನ್ನು ದಾಖಲಿಸಿ, ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಚಾಸಾ-1 ರವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ತಿಳಿಸಿರುವ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.